ಪ್ರಾಚೀನ ಸ್ಮಾರಕಗಳ ರಕ್ಷಣೆ

251 (593), ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯದಲ್ಲಿರುವ ಪ್ರಾಚೀನ ಸ್ಮಾರಕಗಳ ರಕ್ಷಣೆಗಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಪ್ರತಿ ಜಿಲ್ಲೆಯಲ್ಲಿ ಗುರುತಿಸಲಾಗಿರುವ ಪ್ರಾಚೀನ ಸ್ಮಾರಕಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು;

ಆ) ಕಳೆದ 3 ವರ್ಷಗಳಲ್ಲಿ ಇವುಗಳ ರಕ್ಷಣೆ ಮತ್ತು ಶುಚಿತ್ವವನ್ನು ಕಾಪಾಡಲು ಸರ್ಕಾರ ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು;

ಇ) ಪ್ರಾಚೀನ ಸ್ಮಾರಕಗಳು, ಮೂರ್ತ ಮತ್ತು ಅಮೂರ್ತ ಪರಂಪರೆಯ ಸಂಪತ್ತಿನ ರಕ್ಷಣೆ ಮತ್ತು ಇವುಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಮೇಲ್ಕಂಡ ಅವಧಿಯಲ್ಲಿ ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಕರ್ನಾಟಕ ರಾಜ್ಯದಲ್ಲಿ ಸುಮಾರು 25000 ರಿಂದ 30000ಕ್ಕೂ ಹೆಚ್ಚು ಅರಕ್ಷಿತ ಸ್ಮಾರಕಗಳು ಹರಡಿವೆ. ಇವುಗಳಲ್ಲಿ 772 ಸ್ಮಾರಕಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕವೆಂದು ಘೋಷಣೆಯಾಗಿದ್ದು, ಕೇಂದ್ರ ಸಂಸ್ಕೃತಿ ಮಂತ್ರಾಲಯದ ವತಿಯಿಂದ 608 ಸ್ಮಾರಕಗಳನ್ನು ರಾಷ್ಟ್ರೀಯ ಸಂರಕ್ಷಿತ ಸ್ಮಾರಕವೆಂದು ಘೋಷಣೆಯಾಗಿರುತ್ತದೆ. ಒಟ್ಟಾರೆ ರಾಜ್ಯದಲ್ಲಿ 1380 ಸ್ಮಾರಕಗಳು ಸಂರಕ್ಷಿತ ಸ್ಮಾರಕಗಳಾಗಿವೆ. ಜಿಲ್ಲಾವಾರು ಸ್ಮಾರಕಗಳ ಪಟ್ಟಿಯನ್ನು ಅನುಬಂಧ–1ರಲ್ಲಿ ಇರಿಸಲಾಗಿದೆ.

ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯ ಪ್ರಮುಖ ಕರ್ತವ್ಯಗಳಲ್ಲಿ ಪ್ರಾಚೀನ ಸ್ಮಾರಕಗಳ ಸಂರಕ್ಷಣೆಯು

ಪ್ರಮುಖವಾಗಿದ್ದು, ಪ್ರತಿ ಆರ್ಥಿಕ ಸಾಲಿನ ಕ್ರಿಯಾಯೋಜನೆಯಡಿ ಆಯ್ದ ಸ್ಮಾರಕಗಳ ಸಂರಕ್ಷಣೆಯನ್ನು ಕೈಗೊಳ್ಳಲಾಗುತ್ತಿದೆ.

ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಒಟ್ಟಾರೆ 124 ಕಾಮಗಾರಿಗಳು ಮುಂದುವರೆದಿದ್ದು, 59 ಹೊಸ ಕಾಮಗಾರಿಗಳಾಗಿವೆ. ಒಟ್ಟಾರೆ 183 ಕಾಮಗಾರಿಗಳನ್ನು ₹ 6029.50 ಲಕ್ಷಗಳಲ್ಲಿ ಕೈಗೊಳ್ಳಲಾಗುತ್ತಿದೆ. ಇದರಲ್ಲಿ 13ನೇ ಹಣಕಾಸು ಯೋಜನೆಯಡಿ ಒಟ್ಟು 116 ಕಾಮಗಾರಿಗಳು ಪ್ರಗತಿಯಲ್ಲಿದ್ದು, ಈ ಯೋಜನೆಯಡಿ ಒಟ್ಟಾರೆ 50.00 ಕೋಟಿಗಳು ಪ್ರಸಕ್ತ ಆರ್ಥಿಕ ಸಾಲಿನಲ್ಲಿ ನಿಗದಿಯಾಗಿದ್ದು, ಇನ್ನೂ 25.00 ಕೋಟಿಗಳು ಕೇಂದ್ರ ಮತ್ತು ಸಂಸ್ಕೃತಿ ಮಂತ್ರಾಲಯದಿಂದ ಬಿಡುಗಡೆಯಾಗಬೇಕಾಗಿರುತ್ತದೆ.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ ಹಾಗೂ ಸಾರ್ವಜನಿಕ ಸಹಭಾಗಿತ್ವದೊಡನೆ 40:40:20 ಅನುಪಾತದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ವತಿಯಿಂದಲೂ ಸಹ ಸ್ಮಾರಕಗಳ ಸಂರಕ್ಷಣೆಯನ್ನು 2002–03ನೇ ಸಾಲಿನಿಂದಲೂ ಕೈಗೊಳ್ಳಲಾಗುತ್ತಿದ್ದು, ಇದುವರೆವಿಗೂ 128 ಕಾಮಗಾರಿಗಳನ್ನು ಕೈಗೊಂಡಿರುತ್ತಾರೆ. ಇದರಲ್ಲಿ 114 ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದು, 14 ಕಾಮಗಾರಿಗಳು ಪ್ರಗತಿಯಲ್ಲಿವೆ. ಈ ಯೋಜನೆಗೆ ಸರ್ಕಾರದ ವಂತಿಗೆ ₹ 560.52 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಇದರಷ್ಟೆ ಅನುದಾನವನ್ನು ಟ್ರಸ್ಟ್ ವತಿಯಿಂದ ಭರಿಸಿ ಕಾಮಗಾರಿಯನ್ನು ಕೈಗೊಳ್ಳುತ್ತಿದ್ದಾರೆ.

ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಒಟ್ಟು 16 ಕಾಮಗಾರಿಗಳ ಸಂರಕ್ಷಣೆಗೆ ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ ಸಲ್ಲಿಸಿದ್ದಾರೆ. ಈ ಕಾಮಗಾರಿಗಳನ್ನು ₹ 405.00 ಲಕ್ಷಗಳಲ್ಲಿ ಕೈಗೊಳ್ಳುತ್ತಿದ್ದು, ಇದಕ್ಕೆ ಸರ್ಕಾರದ ವಂತಿಗೆ ₹ 142.40 ಲಕ್ಷಗಳಾಗಿದ್ದು, ಈ ಯೋಜನೆಯ

ನಿಯಮದನ್ವಯ ₹ 80.00 ಲಕ್ಷಗಳನ್ನು ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಬಿಡುಗಡೆ ಮಾಡಲಾಗುವುದು.

ಇದಲ್ಲದೆ ಸಾರ್ವಜನಿಕರು ಮತ್ತು ಸಂಘ ಸಂಸ್ಥೆಗಳು ಸಹ ಇಲಾಖೆಯ ಮಾರ್ಗದರ್ಶನದಲ್ಲಿ ಸಂರಕ್ಷಣೆ ಕೈಗೊಳ್ಳಲು ಅವಕಾಶವಿದ್ದು, ಇದರಡಿ ಮೈಸೂರಿನ ಶ್ರೀ ಚಾಮುಂಡೇಶ್ವರಿ ದೇವಾಲಯದ ಸಂರಕ್ಷಣೆಯನ್ನು ಮೇ;ಟಿ.ವಿ.ಎಸ್.ಮೋಟಾರ್ಸ್ ವತಿಯಿಂದ ₹ 50.00 ಲಕ್ಷಗಳಲ್ಲಿ ಕೈಗೊಳ್ಳಲು ಅನುಮತಿಯನ್ನು ನೀಡಲಾಗಿದೆ.

ಜಿಂದಾಲ್ ಫೌಂಡೇಶನ್ ವತಿಯಿಂದ ಹಂಪಿಯಲ್ಲಿರುವ ಸೌಮ್ಯಸೋಮೇಶ್ವರ ದೇವಾಲಯದ ಸಂರಕ್ಷಣೆಯನ್ನು ₹ 45.00 ಲಕ್ಷಗಳಲ್ಲಿ ಕೈಗೊಳ್ಳಲು ಅನುಮತಿಯನ್ನು ನೀಡಲಾಗಿದೆ.

ಇನ್‌ಫೋಸಿಸ್ ಪ್ರತಿಷ್ಠಾನದ ವತಿಯಿಂದ ಗದಗ ಜಿಲ್ಲೆ, ಶಿರಹಟ್ಟಿ ತಾಲ್ಲೂಕು, ಲಕ್ಷ್ಮೇಶ್ವರದಲ್ಲಿರುವ ಶ್ರೀ ಸೋಮೇಶ್ವರ ದೇವಾಲಯದ ಸಂರಕ್ಷಣೆಯನ್ನು ₹ 1.00 ಕೋಟಿ ವೆಚ್ಚದಡಿ ಕೈಗೊಳ್ಳುತ್ತಿದ್ದಾರೆ.

ಮೇಲುಕೋಟೆಯ ಶ್ರೀ ಯೋಗನರಸಿಂಹಸ್ವಾಮಿ ದೇವಾಲಯದ ಸಂರಕ್ಷಣೆಯನ್ನು ₹ 50.00 ಲಕ್ಷಗಳಲ್ಲಿ ಶ್ರೀಮತಿ ಸುಧಾಜನಾರ್ಧನ್ ಇವರ ಸ್ವಂತ ವೆಚ್ಚದಲ್ಲಿ ಕೈಗೊಳ್ಳುತ್ತಿದ್ದು, ದೇವಾಲಯದ ರಾಜಗೋಪುರದ ಜೀರ್ಣೋದ್ಧಾರವನ್ನು ಕೈಗೊಳ್ಳಲು ಸಹ ಮುಂದೆ ಬಂದಿರುತ್ತಾರೆ.

ಇಲಾಖೆಯ ಆಯ್ದ ಸ್ಮಾರಕಗಳ ರಕ್ಷಣೆಯ ಸಲುವಾಗಿ ಗ್ರೂಪ್ ಡಿ ನೌಕರರನ್ನು, ದಿನಗೂಲಿ ನೌಕರರನ್ನು, ಸೆಕ್ಯೂರಿಟಿ ಗಾರ್ಡ್ ಮತ್ತು ಹೋಂಗಾರ್ಡ್‌ನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಉದಾ: ಮೇಲುಕೋಟೆಯ ಸ್ಮಾರಕಗಳು, ರಾಯಚೂರು ಕೋಟೆ, ಬಸವಕಲ್ಯಾಣ ಕೋಟೆ, ಗುಂಡ್ಲುಪೇಟೆ ಶ್ರೀ ವರದರಾಜಸ್ವಾಮಿ ದೇವಾಲಯ, ಹಂಪಿಯಲ್ಲಿನ ಸ್ಮಾರಕಗಳ ಬಳಿ ಮತ್ತು ಗುಲ್ಬರ್ಗಾ ಸಂರಕ್ಷಿತ ಸ್ಮಾರಕಗಳ ರಕ್ಷಣೆಗೆ ನಿಯೋಜಿಸಿದೆ.

ರಾಜ್ಯದಲ್ಲಿ 14 ಪಾರಂಪರಿಕ ಪ್ರದೇಶಗಳ ಇನ್‌ವೆಂಟರಿ ಕಾರ್ಯವು ಪ್ರಗತಿಯಲ್ಲಿದ್ದು, ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಪೂರ್ಣಗೊಳ್ಳಲಿದೆ.

ರಾಷ್ಟ್ರೀಯ ಸ್ಮಾರಕಗಳು ಮತ್ತು ಪ್ರಾಚೀನ ಅವಶೇಷಗಳ ಅಭಿಯಾನ, ನವದೆಹಲಿ, ಇವರ ವತಿಯಿಂದ ರಾಷ್ಟ್ರೀಯ ದಾಖಲೀಕರಣ ಪುಸ್ತಕವನ್ನು ತಯಾರಿಸುತ್ತಿದ್ದು, ಈ ನಿಟ್ಟಿನಲ್ಲಿ ರಾಜ್ಯದಲ್ಲಿರುವ ಮೂರ್ತ ಮತ್ತು ಅಮೂರ್ತ ಪರಂಪರೆಯ ಅಪೂರ್ವ ಕಲಾಸಂಪತ್ತಿನ ದಾಖಲೀಕರಣ ಕಾರ್ಯವನ್ನು ಮಾಡುವ ನಿಟ್ಟಿನಲ್ಲಿ ಅನುದಾನವನ್ನು ನೀಡಲಿದ್ದು, ಈ ಕಾರ್ಯಕ್ರಮವು ಇನ್ನೂ 3 ವರ್ಷಗಳ ಅವಧಿಯೊಳಗೆ ಪೂರ್ಣಗೊಳ್ಳಲಿದೆ.

ಸ್ಮಾರಕಗಳ ಸಂರಕ್ಷಣೆ ಹಾಗೂ ರಕ್ಷಣೆಯು ಇಲಾಖೆಯ ನಿರಂತರ ಕ್ರಿಯೆಯಾಗಿದ್ದು, ಪ್ರತಿ ಸಾಲಿನಲ್ಲಿಯೂ ಸ್ಮಾರಕಗಳ ಸಂರಕ್ಷಣೆಗೆ ಕ್ರಮವಹಿಸಲಾಗುತ್ತಿದೆ.

ಆ) ಮಾಹಿತಿಯನ್ನು ಅನುಬಂಧ–2ರಲ್ಲಿ ಒದಗಿಸಲಾಗಿದೆ.

ಇ) ಮಾಹಿತಿಯನ್ನು ಅನುಬಂಧ–3ರಲ್ಲಿ ಒದಗಿಸಲಾಗಿದೆ.

ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ

252 (594), ಶ್ರೀ ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯದಲ್ಲಿರುವ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಪ್ರತಿ ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕೊರತೆ ಇರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು;

ಆ) ವಿದ್ಯಾರ್ಥಿಗಳ ಹಿತ ದೃಷ್ಟಿಯಿಂದ ಪ್ರಸಕ್ತ ಸಾಲಿನಲ್ಲಿ ಕೊರತೆಯಿರುವ ಎಲ್ಲಾ ಪದವಿ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದೆ;

ಇ) ಹಾಗಿದ್ದಲ್ಲಿ, ಎಷ್ಟು ಉಪನ್ಯಾಸಕರನ್ನು ಪ್ರಸಕ್ತ ಸಾಲಿನಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು?